ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಪುರಸಭೆ ಮುಖ್ಯಾಧಿಕಾರಿ ಹುದ್ದೆಗೆ ಸಮಾನಾಂತರವಲ್ಲದ ಅಧಿಕಾರಿಗಳನ್ನು ನೇಮಿಸಿರುವ ಬಗ್ಗೆ

ಶ್ರೀ ಆರ್. ಪ್ರಸನ್ನಕುಮಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1067 (1164) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪುರಸಭೆ ಮುಖ್ಯಾಧಿಕಾರಿ ಹುದ್ದೆಗೆ ಕಂದಾಯಾಧಿಕಾರಿ, ಆರೋಗ್ಯ ನಿರೀಕ್ಷಕರು, ಸಂಘಟನಾಧಿಕಾರಿ, ಪ್ರಥಮ ದರ್ಜೆ ಸಹಾಯಕರು ಹಾಗೂ ಇತರೆ ಇಲಾಖೆಯ ಸಮಾನಾಂತರವಲ್ಲದ ಹುದ್ದೆಯ ನೌಕರರನ್ನು ಮುಖ್ಯಾಧಿಕಾರಿ ಹುದ್ದೆಗೆ ಖಾಯಂ ವರ್ಗಾವಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ಈ ರೀತಿ ಪೌರಾಯುಕ್ತರುಗಳು, ಪುರಸಭೆಗಳಲ್ಲಿ ಖಾಯಂ ನೇಮಕಗೊಂಡು ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿದ್ದಾರೆಯೇ; ಅಥವಾ ಬೇರೆ ಇಲಾಖೆಗೆ ನಿಯೋಜನೆ ಮೇಲೆ ತೆರಳಿರುತ್ತಾರೆಯೇ; ಬೇರೆ ಇಲಾಖೆಗೆ ನಿಯೋಜನೆ ಮೇಲೆ ಹೋಗಲು ಕಾರಣಗಳೇನು; ಅಥವಾ ಈ ನೌಕರರು ಈ ಇಲಾಖೆಯಲ್ಲಿ ಅಗತ್ಯತೆ ಇಲ್ಲವೆ; ಈ ರೀತಿ ನಿಯೋಜನೆ ಮೇಲೆ ಹೋಗಿರುವವರು ಯಾರು? (ಪೌರಾಯುಕ್ತರುಗಳ ಮಾಹಿತಿ ನೀಡುವುದು)